# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1605 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಡಾ|| ಎಂ.ಜಿ. ಮುಳೆ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸ ಬೇಕಾದ ದಿನಾಂಕ: | : | 21/03/2025 |
| ಉತ್ತರಿಸುವ ಸಚಿವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಕಲಚೇತನರ ವ್ಯಕ್ತಿಗಳಿಗೆ ಸಹಾಯ ಮಾಡಲು ವಿಕಲಚೇತನರ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳಿವೆ; ಇದಕ್ಕಾಗಿ ಎಷ್ಟು ಹಣ ಮೀಸಲಿಡಲಾಗಿದೆ. | ವಿಕಲಚೇತನ ವ್ಯಕ್ತಿಗಳಿಗೆ ಸಹಾಯ ಮಾಡಲು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿರುವ ಯೋಜನೆಗಳ ಮಾಹಿತಿಯನ್ನು **ಅನುಬಂಧ-01ರಲ್ಲಿ ಲಗತ್ತಿಸಿದೆ.**<br><br>2024-25ನೇ ಸಾಲಿನಲ್ಲಿ ಸದರಿ ಯೋಜನೆಗಳ ಅನುಷ್ಠಾನಕ್ಕಾಗಿ ರೂ.25073.68 ಲಕ್ಷಗಳನ್ನು ಮೀಸಲಿಡಲಾಗಿದೆ. |
| ಆ) | ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಕಾಯ್ದೆಯ ನಿಯಮ 16ರ ಪ್ರಕಾರ 21 ಬಗೆಯ ವಿಕಲಚೇತನ ವ್ಯಕ್ತಿಗಳಿಗೆ ಸಹಾಯ ಮಾಡುವ ಅವಕಾಶ ಇರುವುದು ನಿಜವೇ; | ಹೌದು, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಕಾಯ್ದೆಯ ನಿಯಮ 16ರ ಪ್ರಕಾರ 21 ಬಗೆಯ ಅಂಗವಿಕಲತೆಯನ್ನು ಗುರುತಿಸಲಾಗಿರುತ್ತದೆ. |
| ಇ) | ಹಾಗಿದ್ದಲ್ಲಿ ಕೇವಲ ಮೂರು ಬಗೆಯ ಅಂಗವಿಕಲತೆಯುಳ್ಳ ವ್ಯಕ್ತಿಗಳನ್ನು ಹೊರತುಪಡಿಸಿ ಉಳಿದ 18 ಬಗೆಯ ವಿಕಲಚೇತನರಿಗೆ ಈ ಸೌಲಭ್ಯ ನೀಡದಿರಲು ಕಾರಣವೇನು: ಹಾಲಿ ಇರುವ ಮಾರ್ಗ ಸೂಚಿಗಳನ್ನು ಪರಿಷ್ಕರಿಸಿ ಇವರಿಗೂ ಸೌಲಭ್ಯಗಳನ್ನು ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದೇ; | ಕಾಯ್ದೆಯಡಿ ಬರುವ ಎಲ್ಲಾ ಬಗೆಯ ವಿಕಲಚೇತನರಿಗೂ ಅನ್ವಯವಾಗುವಂತೆ ಅವರ ವಿಕಲತೆಗಳಿಗನುಗುಣವಾಗಿ, ಇಲಾಖಾ ಯೋಜನೆಗಳಡಿ ಸೌಲಭ್ಯವನ್ನ ಕಲ್ಪಿಸಲಾಗುತ್ತಿದ್ದು, ವಿವರಗಳನ್ನು **ಅನುಬಂಧ-02ರಲ್ಲಿ ಲಗತ್ತಿಸಿದೆ**. |
| ಈ) | ಈ ತಾರತಮ್ಯವನ್ನು ತಪ್ಪಿಸಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಹೊರಡಿಸಿರುವ ಮಾರ್ಗಸೂಚಿಯನ್ನು ಪರಿಷ್ಕರಿಸಿ ಎಲ್ಲಾ 21 ಬಗೆಯ ವಿಕಲಚೇತನ ವ್ಯಕ್ತಿಗಳಿಗೂ ಎಲ್ಲಾ ರೀತಿಯ ಸೌಲಭ್ಯಗಳು ಸಿಗುವಂತೆ ಕೂಡಲೇ ಆದೇಶ ಹೊರಡಿಸಲಾಗುವುದೇ? | ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಹೊರಡಿಸಿರುವ ಮಾರ್ಗಸೂಚಿಯ ಯೋಜನಾ ಇಲಾಖೆಯಿಂದ ಆದೇಶ/ ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ.<br><br>ಮುಂದುವರೆದು ಪ್ರಸ್ತುತ ಮಾರ್ಗಸೂಚಿ ಪರಿಷ್ಕರಣೆಯ ಕುರಿತ ಪ್ರಸ್ತಾವನೆ ಸರ್ಕಾರ ಮುಂದಿರುವುದಿಲ್ಲ. |

**ಸಂಖ್ಯೆ:ಮಮಇ 109 ಪಿಹೆಚ್‌ಪಿ 2025**

(ಲಕ್ಷ್ಮೀ ಆರ್, ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು

# ಅನುಬಂಧ-1

# ಇಲಾಖೆಯು ವಿಕಲಚೇತನರಿಗಾಗಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳು:

**ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ:**
ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಆನ್‌ಲೈನ್‌ನಲ್ಲಿ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ. SSP ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ ವಿದ್ಯಾರ್ಥಿ ವೇತನದ ಸೌಲಭ್ಯವನ್ನು ಪಡೆಯಬಹುದಾಗಿದೆ.

**ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:**
ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ. ಸೇವಾ ಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಿ ವಿದ್ಯಾರ್ಥಿಗಳು ಪ್ರೋತ್ಸಾಹ ಧನದ ಸೌಲಭ್ಯವನ್ನು ಪಡೆಯಬಹುದಾಗಿದೆ.

**ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**
ಎಸ್.ಎಸ್.ಎಲ್.ಸಿ ನಂತರದ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ, ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ.

**ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:**
ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 164 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ.

**ಆಧಾರ ಯೋಜನೆ :**
ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನವನ್ನು ಇಲಾಖೆಯಿಂದ ನೀಡಲಾಗುತ್ತದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ಗ್ರಾಮೀಣ ಪುನರ್ವಸತಿ ಯೋಜನೆ:**
ಈ ಯೋಜನೆಯನ್ನು ರಾಜ್ಯದ ಎಲ್ಲಾ 31 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು

ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು 03 ಜಿಲ್ಲೆಗಳಿಗೆ ಒಬ್ಬರಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಂಯೋಜಕರು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶವಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ತಲುಪಿಸಲಾಗುವುದು. ಪುನರ್ವಸತಿ ಕಾರ್ಯಕರ್ತರಿಗೆ ಮಾಹೆಯಾನ ಈ ಕೆಳಕಂಡಂತೆ ಗೌರವಧನವನ್ನು ಪ್ರಸ್ತುತ ಪಾವತಿಸಲಾಗುತ್ತಿದೆ.

| ಕ್ರ. ಸಂ. | ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು | ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು | ನಗರ ಪುನರ್ವಸತಿ ಕಾರ್ಯಕರ್ತರು | ಜಿಲ್ಲಾ ಸಂಯೋಜಕರು | ರಾಜ್ಯ ಸಂಯೋಜಕರು |
|---|---|---|---|---|---|
| 1 | 9000/- | 15,000/- | 9,000/- | 19,000/- | 38,000/- |

**ಮರಣ ಪರಿಹಾರ ನಿಧಿ ಯೋಜನೆ**: ಈ ಯೋಜನೆಯಡಿ ಕಾರ್ಯಕರ್ತರು ನಿಧನ ಹೊಂದಿದಲ್ಲಿ ರೂ.1.00 ಲಕ್ಷಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:**

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಲಾಗುವುದು. ಅದರಿಂದ ಬರುವ ಬಡ್ಡಿ ಹಣವನ್ನು ಫಲಾನುಭವಿಗಳು ಉಪಯೋಗಿಸಬಹುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಸಹ ಅವಕಾಶವಿರುತ್ತದೆ.

**<u>ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :</u>**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ. ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ 5 ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ. ಈ ಸೌಲಭ್ಯವನ್ನು ಗರಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**<u>ಸಾಧನ ಸಲಕರಣೆಗಳು :</u>**

ಈ ಯೋಜನೆಯಡಿಯಲ್ಲಿ ವಿಕಲಚೇತನರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು (ಕ್ಯಾಲಿಪರ್ಸ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್, ಕ್ರಚಸ್, ಊರುಗೋಲು, ಶ್ರವಣಸಾಧನ ಇನ್ನು ಮುಂತಾದವುಗಳು) ರೂ.15,000/-ಗಳ ಮಿತಿಯೊಳಗೆ ಉಚಿತವಾಗಿ ನೀಡಲಾಗುತ್ತದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ರೂ.11,500/- ಮತ್ತು ನಗರ ಪ್ರದೇಶದಲ್ಲಿ ರೂ.24,000/- ನಿಗದಿಗೂಳಿಸಲಾಗಿದೆ. ಫಲಾನುಭವಿಗಳು

ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ತೀವ್ರತೆರನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ**

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರುವ ವಿಕಲಚೇತನರಿಗೆ ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಒದಗಿಸಲಾಗುತ್ತಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ಶ್ರವಣದೋಷವುಳ್ಳ ವ್ಯಕ್ತಿಗಳ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರಗಳು:**

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರವಣದೋಷವುಳ್ಳ ವ್ಯಕ್ತಿಗಳ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರಗಳನ್ನು ಖರೀದಿಸಿ ವಿತರಿಸಲಾಗುತ್ತಿದೆ. ಹೊಲಿಗೆ ಯಂತ್ರವನ್ನು ವಿತರಿಸಲು ನಿರ್ದೇಶನಾಲಯದಲ್ಲಿ ಟೆಂಡರ್ ಕರೆಯಲಾಗಿ ಸಂಸ್ಥೆಯನ್ನು ಆಯ್ಕೆ ಮಾಡಲಾಗುವುದು ನಂತರ ಜಿಲ್ಲಾ ಮಟ್ಟದಲ್ಲಿ ಆಯ್ಕೆ ಸಮಿತಿಯನ್ನು ರಚಿಸಿದ್ದು, ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಹೊಲಿಗೆ ಯಂತ್ರವನ್ನು ವಿತರಿಸಲಾಗುವುದು. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ದೃಷ್ಟಿದೋಷವುಳ್ಳ ವ್ಯಕ್ತಿಗಳಿಗೆ ಬ್ರೈಲ್ ಕಿಟ್:**

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ ೫೦೦ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಮೊಬೈಲ್, ಬ್ರೆಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರೆ ಸಾಧನಗಳನ್ನು ಒಳಗೊಂಡ ಖರೀದಿಸಿ ವಿತರಿಸಲಾಗುತ್ತಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿತರಿಸುವ ಯೋಜನೆ:**

2023-24ನೇ ಸಾಲಿನಿಂದ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿಕಲಚೇತನರಿಗೆ ಅನುಕೂಲವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿತರಿಸಲಾಗುತ್ತಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ಸಾಧನೆ ಮತ್ತು ಪ್ರತಿಭೆ ಯೋಜನೆ:**

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯನ್ನು ಹಾಗೂ ಅಂಗವಿಕಲ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸೇವಾ ಸಿಂಧು ಪೋರ್ಟಲ್‌ರಡಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

**ನಿರಾಮಯ ಆರೋಗ್ಯ ವಿಮಾ ಯೋಜನೆ : (ಆಟಿಸಂ, ಸೆರೆಬ್ರಲ್ ಪಾಲ್ಸಿ, ಬೌದ್ಧಿಕ ಅಂಗವಿಕಲತೆ ಮತ್ತು ಬಹುವಿಧ ಅಂಗವಿಕಲತೆ)**

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ವಿಕಲಚೇತನರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯು ಜಾರಿಯಲ್ಲಿದ್ದು, ಮೇಲೆ ವಿವರಿಸಿದ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿಗೆ ವರ್ಷಕ್ಕೆ ಒಂದು ಬಾರಿಗೆ ಪ್ರೀಮಿಯಂ ಮೊತ್ತ ರೂ.250/-ಗಳನ್ನು ನ್ಯಾಷನಲ್ ಟ್ರಸ್ಟ್ ಸಂಸ್ಥೆಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ.

**ಸ್ಪರ್ಧಾ ಚೇತನ:-**

ಈ ಯೋಜನೆಯಡಿ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪರೀಕ್ಷಾ ಪೂರ್ವ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆಯುವ ವಿಕಲಚೇತನರಿಗೆ ಮಾರ್ಗಸೂಚಿಯಲ್ಲಿ ನಿಗದಿಪಡಿಸಿದ ಮೊತ್ತವನ್ನು ಪಾವತಿಸಲಾಗುವುದು.

**ಆರೈಕೆದಾರರ ಭತ್ಯೆ:-**

ಸೆರಬ್ರಲ್ ಪಾಲ್ಸಿ, ಮಸ್ಕ್ಯುಲರ್ ಡಿಸ್ಟ್ರೋಫಿ, ಪಾರ್ಕಿನ್‌ಸನ್ ಮತ್ತು ಮಲ್ಟಿಪಲ್ ಸ್ಕ್ಲೆರೋಸಿಸ್ ಖಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ ರೂ.1,000/-ಗಳ ಪ್ರೋತ್ಸಾಹ ಧನ ನೀಡುವ ಯೋಜನೆಯನ್ನು 2024-25ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.

**ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ:-**

ವಿಕಲಚೇತನರಿಗಾಗಿ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ವಿಕಲಚೇತನರಿಗೆ ಒದಗಿಸಲು ಪ್ರಧಾನ ಕಚೇರಿಯಲ್ಲಿ 01 ಮಾಹಿತಿ ಸಲಹಾ ಕೇಂದ್ರ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ಜಿಲ್ಲಾ ಕಚೇರಿಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಈ ಕೇಂದ್ರಗಳಲ್ಲಿ ಸಿಬ್ಬಂದಿಗಳ ಗೌರವಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

**1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 33 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

**ನಿರಾಶ್ರಿತ ಭೌದ್ಧಿಕ ವಿಕಲಚೇತನರ ಅನುಪಾಲನಾ ಗೃಹ:** ನಿರಾಶ್ರಿತ ಭೌದ್ಧಿಕ ವಿಕಲಚೇತನರ ಆರೈಕೆ ಮತ್ತು ಸಂರಕ್ಷಣೆಗಾಗಿ 4 ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ, ಬೆಳಗಾವಿ, ಕಲಬುರಗಿ ಮತ್ತು ಮೈಸೂರು ವಿಭಾಗಗಳಲ್ಲಿ ಇಲಾಖೆಯಿಂದ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ನಿರ್ದೇಶಕರು,
ವಿಕಲಚೇತನರ ಹಾಗೂ ಹಿರಿಯ
ನಾಗರಿಕರಣ ಸಬಲೀಕರಣ ಇಲಾಖೆ,
ಬೆಂಗಳೂರು

## ಅನುಬಂಧ-02

- ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವ ಎಲ್ಲಾ ಬಗೆಯ ವಿಕಲಚೇತನರಿಗೆ ಮಾಸಾಶನವನ್ನು ನೀಡಲಾಗುತ್ತಿದೆ.

- ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವ ಎಲ್ಲಾ ಬಗೆಯ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ ಯೋಜನೆಯಡಿ ಸೌಲಭ್ಯವನ್ನು ನೀಡಲಾಗುತ್ತಿದೆ.

- ಸರ್ಕಾರದ ವತಿಯಿಂದ ನಿರ್ಗತಿಕ ಬುದ್ಧಿಮಾಂದ್ಯರಿಗೆ (ಪು) ಸಮಾಜ ಸೇವಾ ಸಂಕೀರ್ಣ(ಬೆಂಗಳೂರು), ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳು(ಬೆಂಗಳೂರು ಹಾಗೂ ಹುಬ್ಬಳ್ಳಿ), ಎಲ್ಲಾ ಬಗೆಯ ವಿಕಲಚೇತನರಿಗೆ ಪುರುಷರ/ಮಹಿಳೆಯರ ಸರ್ಕಾರಿ ವಸತಿನಿಲಯಗಳು(ಬೆಂಗಳೂರು), ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು (ಬೆಂಗಳೂರು ಹಾಗು ಬೆಳಗಾವಿ) ನಡೆಸಲಾಗುತ್ತಿದೆ.

- ಎಲ್ಲಾ ಬಗೆಯ ವಿಕಲಚೇತನರಿಗೆ ಆಧಾರ ಯೋಜನೆಯಡಿ ಸ್ವಯಂ ಉದ್ಯೋಗ ಕೈಗೊಳ್ಳಲು ಧನ ಸಹಾಯವನ್ನು ನೀಡಲಾಗುತ್ತಿದೆ.

- ಎಲ್ಲಾ ಬಗೆಯ ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ

- ವಿಕಲಚೇತನರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು (ಕ್ಯಾಲಿಪರ್ಸ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್, ಕೃಚಸ್, ಊರುಗೋಲು, ಶ್ರವಣಸಾಧನ ಇನ್ನು ಮುಂತಾದವುಗಳು) ರೂ.15,000/-ಗಳ ಮಿತಿಯೊಳಗೆ ಉಚಿತವಾಗಿ ನೀಡಲಾಗುತ್ತದೆ.

- ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

- 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 33 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.

- ನಿರಾಶ್ರಿತ ಬೌದ್ಧಿಕ ವಿಕಲಚೇತನರ ಆರೈಕೆ ಮತ್ತು ಸಂರಕ್ಷಣೆಗಾಗಿ 4 ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ, ಬೆಳಗಾವಿ, ಕಲಬುರಗಿ ಮತ್ತು ಮೈಸೂರು ವಿಭಾಗಗಳಲ್ಲಿ ಇಲಾಖೆಯಿಂದ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

- ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯನ್ನು ಹಾಗೂ ಅಂಗವಿಕಲ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

- ಯಂತ್ರಚಾಲಿತ ದ್ವಿಚಕ್ರವಾಹನ ಹಾಗೂ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಚಲನವಲನ ದೋಷ ಹೊಂದಿರುವ ವಿಕಲಚೇತನರಿಗೆ ಈ ಸೌಲಭ್ಯವನ್ನು ನೀಡಲಾಗುತ್ತಿದೆ.

- ದೃಷ್ಟಿದೋಷವುಳ್ಳ ವ್ಯಕ್ತಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ಬ್ರೈಲ್ ಕಿಟ್‌ಗಳು ಹಾಗೂ ಇನ್ನಿತರೆ ಸಾಧನ ಸಲಕರಣೆಗಳ ಸೌಲಭ್ಯವನ್ನು ನೀಡಲಾಗುತ್ತಿದೆ.

ಅ) ದೃಷ್ಟಿದೋಷವುಳ್ಳ ಮಹಿಳೆಯರಿಗೆ ಶಿಶುಪಾಲನಾ ಭತ್ಯೆ ಯೋಜನೆಯಡಿ ಮಾಸಿಕ ರೂ.2,000/-ಗಳ ಶಿಶುಪಾಲನಾ ಭತ್ಯೆಯನ್ನು ನೀಡಲಾಗುತ್ತಿದೆ.

ಆ) ದೃಷ್ಟಿದೋಷವುಳ್ಳ ಮಕ್ಕಳಿಗೆ ಸರ್ಕಾರದ ವತಿಯಿಂದ 04 ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.

ಇ) ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ 17 ವಿಶೇಷ ಶಾಲೆಗಳನ್ನು ಸ್ವಯಂ ಸೇವಾ ಸಂಸ್ಥೆಗಳು ಮೂಲಕ ನಡೆಸಲಾಗುತ್ತಿದೆ.

- ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಹೊಲಿಗೆ ಯಂತ್ರ, ಶ್ರವಣ ಸಾಧನಗಳು ಹಾಗೂ ಇನ್ನಿತರೆ ಸಾಧನ ಸಲಕರಣೆಗಳ ಸೌಲಭ್ಯಗಳನ್ನು ನೀಡಲಾಗುತ್ತಿದೆ.

  ಅ) ಶ್ರವಣದೋಷವುಳ್ಳ ಮಕ್ಕಳಿಗೆ ಸರ್ಕಾರದ ವತಿಯಿಂದ 05 ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.

  ಆ) ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ 43 ವಿಶೇಷ ಶಾಲೆಗಳನ್ನು ಸ್ವಯಂ ಸೇವಾ ಸಂಸ್ಥೆಗಳು ಮೂಲಕ ನಡೆಸಲಾಗುತ್ತಿದೆ.

  ಇ) 0-4 ವರ್ಷದೊಳಗಿನ ಶ್ರವಣದೋಷವುಳ್ಳ ಮಕ್ಕಳಿಗೆ ಹಾಗೂ ಅವರ ತಾಯಂದಿರ ಸಹಿತ ವಾಕ್ ತರಬೇತಿ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ.

- ಬುದ್ಧಿಮಾಂದ್ಯ, ದೃಷ್ಟಿದೋಷ, ಶ್ರವಣದೋಷ ವಿಕಲಚೇತನರಿಗೆ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.

  ಅ) ಅಂಗವಿಕಲ ಮಕ್ಕಳ ವಿಶೇಷ ಶೈಕ್ಷಣಿಕ ಯೋಜನೆಯಡಿ 104 ವಿಶೇಷ ಶಾಲೆಗಳನ್ನು ಸ್ವಯಂ ಸೇವಾ ಸಂಸ್ಥೆಗಳು ಮೂಲಕ ನಡೆಸಲಾಗುತ್ತಿದೆ

- ಬುದ್ಧಿಮಾಂದ್ಯರು, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಇರುವವರಿಗೆ ನಿರಾಮಯ ಯೋಜನೆಯಡಿ ಆರೋಗ್ಯ ವಿಮಾ ಯೋಜನೆಯ ಸೌಲಭ್ಯವನ್ನು ನೀಡಲಾಗುತ್ತಿದೆ.

- ಆಟಿಸಂ, ಸೆರೆಬ್ರಲ್ ಪಾಲ್ಸಿ ವಿಕಲತೆ ಇರುವವರಿಗೆ ಹಗಲು ಯೋಗಕ್ಷೇಮ ಕೇಂದ್ರಗಳು.

- ಸೆರೆಬ್ರಲ್ ಪಾಲ್ಸಿ, ಮಸ್ಕ್ಯುಲರ್ ಡಿಸ್ಟ್ರೋಫಿ, ಪಾರ್ಕಿನ್‌ಸನ್ಸ್ ಮತ್ತು ಮಲ್ಟಿಪಲ್ ಸ್ಲೆರೋಸಿಸ್ ಖಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ ರೂ.1000/-ಗಳ ಪ್ರೋತ್ಸಾಹಧನ ನೀಡಲಾಗುವ ಯೋಜನೆಯನ್ನು 2024-25ನೇ ಸಾಲಿನಲ್ಲಿ ಜಾರಿಗೆ ತರಲಾಗಿದೆ.

- 2025-26ನೇ ಸಾಲಿನಲ್ಲಿ ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನತೆ) ಕಾಯಿಲೆಗಳಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ರೂ.1000/-ಗಳ ಪ್ರೋತ್ಸಾಹಧನ ನೀಡಲಾಗುವುದೆಂದು ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣದಲ್ಲಿ ಘೋಷಿಸಿರುತ್ತಾರೆ.

ನಿರ್ದೇಶಕರು,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ, ಬೆಂಗಳೂರು.